ಮೈಸೂರ ಗೆಜೆಟ್ಟ

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಸೆಪ್ಟೆಂಬರ್ ತಾ॥ 17, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಶೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಜೇಫ್ ಜಡ್ಜ್‌ರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನ್ಯಾಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಪರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಆವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫೇಸ್‌ಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜೂ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಟಿಕೇಟಾದ ಡಿಮಾಂಡ್ ಡ್ರಾಫ್ಟ್‌ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಕೋಲಾರ ಡಿಸ್ಟ್ರಿಕ್ಟ್.

ತಾರೀಖು 25ನೇ ಆಗಸ್ಟು 1887.

ಕೋಲಾರ ಡಿಸ್ಟ್ರಿಕ್ಟು ಚಿಕ್ಕಬಳ್ಳಾಪುರ ಸಬ್ ರಿಜಿಸ್ಟ್ರೀ ಆಫೀಸಿನಲ್ಲಿ ಈ ಕೆಳಗೆ ವಿವರಿಸೋಣಾದ ರಿಜಿಸ್ಟ್ರಾದ 1 ತಂಸೂಕು 2 ವರುಷಗಳಿಗೆ ಮೇಲ್ಪಟ್ಟು ಕಾಲದಿಂದ ಹಾಜರ್ಮಾಡಿದವನು ವಾಪಸ್ ಕೇಳದೇ ಇರುವ ಕಾರಣ ನಿಂತಿರುತ್ತೆ ಡಿಟೋ ತಂಸೂಕನ್ನು ಹಾಜರ್ಮಾಡಿದವನಾಗಲಿ ಅಥವಾ ವಾಪಸ್ ಪಡಿಯಲು ಅಧಿಕಾರ ಹೊಂದಿದವರಾಗಲಿ ಈ ಲಾಗಾಯತು 1 ತಿಂಗಳೊಳಗೆ ಚಿಕ್ಕಬಳ್ಳಾಪುರ ಸಬ್ ರೆಜಿಸ್ಟ್ರಾರ್ರ ರೂಬರೂ ಹಾಜರಾಗಿ ರೂಲ್ಸ್ ಮೇರಿಗೆ ಪಾವತೀ ಮಾಡಬೇಕಾಗಿರುವ ಭದ್ರ ಪಡಿಸಿದ ಫೀಜು ಪಾವತೀ ಮಾಡಿ ವಾಪಸ್ ಪಡೆಯಬಹುದು ತಪ್ಪಿದರೆ ರೆಜಿಸ್ಟ್ರೇಷ್ಯನ್ ಆಕ್ಟು 85ನೇ ಸೆಕ್ಷನ್ ಪ್ರಕಾರ ನಾಶ ಪಡಿಸಲ್ಪಡುವದು:—